1497 (2075) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) :- ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಲಖಿಣಗಾವ, ಭಾತಂಬ್ರಾ ಮತ್ತು ನಿಟ್ಟೂರ ಗ್ರಾಮಗಳಿಗೆ 33 ಕೆ.ವಿ. ವಿದ್ಯುತ್ ಘಟಕಗಳು ಸರ್ಕಾರದಿಂದ ಮಂಜೂರಾಗಿದೆಯೇ;

ಆ) ಹಾಗಿದ್ದಲ್ಲಿ, ಈ ಮೂರು ಗ್ರಾಮಗಳ ವಿದ್ಯುತ್ ಘಟಕಗಳ ಕಾಮಗಾರಿ ಯಾವ ಹಂತದಲ್ಲಿದೆ;

ಇ) ಪ್ರಾರಂಭಿಸಲ್ಪಟ್ಟ ವಿದ್ಯುತ್ ಘಟಕಗಳ ಕಾಮಗಾರಿಯನ್ನು ಪ್ರಸ್ತುತ ವರ್ಷದಲ್ಲಿ ಸಂಪೂರ್ಣವಾಗಿ ಮುಗಿಸಿ ಅಲ್ಲಿಯ 3 ಗ್ರಾಮಗಳ ಜನರಿಗೆ ಹೆಚ್ಚಿನ ವಿದ್ಯುತ್ ಸೌಲಭ್ಯ ಕಲ್ಪಿಸಿ ಕೊಡಲಾಗುವುದೆ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಭಾಲ್ಕಿ ಕ್ಷೇತ್ರ ವ್ಯಾಪ್ತಿಯ ಭಾತಂಬ್ರದಲ್ಲಿ ಒಂದು 33/11 ಕೆ.ವಿ. ವಿದ್ಯುತ್ ಕೇಂದ್ರ ಮಂಜೂರಾಗಿರುತ್ತದೆ. ನಿಟ್ಟೂರು ಮತ್ತು ಲಖಿಣಗಾವ ಗ್ರಾಮಗಳಲ್ಲಿ 33/11 ಕೆ.ವಿ. ವಿದ್ಯುತ್ ಕೇಂದ್ರಗಳ ಸ್ಥಾಪನೆ ಬಗ್ಗೆ ಪ್ರಸ್ತಾವನೆಗಳು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯಿಂದ ಅನುಮೋದನೆ ಆಗಬೇಕಾಗಿರುತ್ತದೆ.

ಆ) ಭಾತಂಬ್ರದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ 33/11 ಕೆ.ವಿ. ವಿದ್ಯುತ್ ಉಪಕೇಂದ್ರಕ್ಕೆ ಬೇಕಾಗಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಕ್ರಮ ಜರುಗಿಸಲಾಗುತ್ತಿದೆ. ನಿಟ್ಟೂರು ಮತ್ತು ಲಖಿಣಗಾವ ಗ್ರಾಮಗಳಲ್ಲಿ 33/11 ಕೆ.ವಿ. ವಿದ್ಯುತ್ ಕೇಂದ್ರಗಳ ಸ್ಥಾಪನೆಯ ಬಗ್ಗೆ ಪ್ರಸ್ತಾವನೆಗಳಿಗೆ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯಿಂದ ಅನುಮೋದನೆಯನ್ನು ಪಡೆಯಲು ಕ್ರಮಗಳನ್ನು ಜರುಗಿಸಲಾಗುತ್ತಿದೆ.

ಇ) ಭಾತಂಬ್ರದಲ್ಲಿ ಸ್ಥಾಪಿಸಲು ಉದ್ದೇಶಿಸಲಾಗಿರುವ 33/11 ಕೆ.ವಿ. ವಿದ್ಯುತ್ ಉಪಕೇಂದ್ರಕ್ಕೆ ಬೇಕಾಗಿರುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗುತ್ತಿರುವುದರಿಂದ

ಕಾಮಗಾರಿಯು ಪ್ರಾರಂಭವಾಗಿರುವುದಿಲ್ಲ. ಮುಂಬರುವ ವರ್ಷವಾದ 2007–08ರಲ್ಲಿ ಈ ಉದ್ದೇಶಿತ 33/11 ಕೆ.ವಿ. ವಿದ್ಯುತ್ ಕೇಂದ್ರದ ಕಾಮಗಾರಿಯನ್ನು ಪ್ರಾರಂಭಿಸಿ, ಅದೇ ವರ್ಷದ ಅಂತ್ಯದೊಳಗೆ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ. ನಿಟ್ಟೂರು ಮತ್ತು ಲಖಣಗಾವ ಗ್ರಾಮಗಳಲ್ಲಿ 33/11 ಕೆ.ವಿ.ವಿದ್ಯುತ್ ಉಪಕೇಂದ್ರಗಳ ಸ್ಥಾಪನೆಯ ಪ್ರಸ್ತಾವನೆಗೆ ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆ ದೊರೆತ ನಂತರ, ಮುಂದಿನ ಕ್ರಮಗಳನ್ನು ಜರುಗಿಸಲಾಗುವುದು.

1498 (2076) ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಹ್ಮದಾಬಾದ್ ಗ್ರಾಮಕ್ಕೆ 110 ಕೆ.ವಿ. ವಿದ್ಯುತ್ ಘಟಕ ಮಂಜೂರಾತಿಯಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಗ್ರಾಮಕ್ಕೆ ಮಂಜೂರಾಗಿರುವ 110 ಕೆ.ವಿ.ವಿದ್ಯುತ್ ಘಟಕದ ಕಾರ್ಯ ಈಗ ಯಾವ ಹಂತದಲ್ಲಿದೆ;

ಇ) ಪ್ರಸ್ತುತ ವರ್ಷದಲ್ಲಿ ಈ ಘಟಕ ಕೆಲಸ ಸಂಪೂರ್ಣ ಮುಗಿಸಿ ಅಲ್ಲಿಯ ಜನರಿಗೆ 110 ಕೆ.ವಿ. ವಿದ್ಯುತ್ ಘಟಕದ ಸೌಲಭ್ಯ ಒದಗಿಸಿಕೊಡಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) :

ಅ) ಇಲ್ಲ. ಭಾಲ್ಕಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಅಹ್ಮದಾಬಾದ್ ಗ್ರಾಮಕ್ಕೆ 110 ಕೆ.ವಿ ವಿದ್ಯುತ್ ಉಪ ಕೇಂದ್ರದ ಮಂಜೂರಾತಿಯ ಪ್ರಸ್ತಾವನೆಯು ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.